ಕರ್ನಾಟಕ ಸರ್ಕಾರ

ಸಂ: ಡಿಟಿಇ 10 ಇಎಸ್‌ಟಿ (10) 2017

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560001.
ದಿನಾಂಕ: 09.05.2017

**ಸುತ್ತೋಲೆ**

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ರಾಯಚೂರು, ಹೂವಿನಹಡಗಲಿ ಮತ್ತು ಕಾರವಾರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಪ್ರಸ್ತಾವಿತ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಗಂಗಾವತಿ ಸಂಸ್ಥೆಗಳನ್ನು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿಗೆ ವರ್ಗಾಯಿಸುವ (Transfer) ಸಂಬಂಧ ಸಿಬ್ಬಂದಿಯವರು ಅಭಿಮತ ಪತ್ರ ನೀಡುವ ಕುರಿತು.

*-***-*

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಾದ ರಾಯಚೂರು, ಹೂವಿನಹಡಗಲಿ ಮತ್ತು ಕಾರವಾರ ಹಾಗೂ ಪ್ರಸ್ತಾವಿತ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಗಂಗಾವತಿ ಸಂಸ್ಥೆಗಳನ್ನು ಸರ್ಕಾರದ ಆದೇಶ ಸಂಖ್ಯೆ: ಇಡಿ 249 ಡಿಟಿಇ 2011, ದಿನಾಂಕ: 03-11-2011ರಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇಲ್ಲಿಗೆ ವರ್ಗಾಯಿಸಲಾಗಿರುತ್ತದೆ(Transfer). ನಂತರ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ಇಡಿ 162 ಟಿಇಎಲ್ 2016, ದಿನಾಂಕ: 27-03-2017ರಲ್ಲಿ ಈ ಕೆಳಕಂಡಂತೆ ಆದೇಶಿಸಿರುತ್ತದೆ.

> **"ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹೂವಿನಹಡಗಲಿ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರವಾರ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಗಂಗಾವತಿ ಈ ಕಾಲೇಜುಗಳಲ್ಲಿ ಹಾಲಿ ಸೇವೆಸಲ್ಲಿಸುತ್ತಿರುವ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿಯೇ ಮುಂದುವರೆಯಲು ಅಥವಾ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇದರ ಸೇವೆಯಲ್ಲಿ ಸೇರ್ಪಡೆಗೊಳಿಸುವ ಕುರಿತಂತೆ ತಮ್ಮ ಇಚ್ಛೆಯನ್ನು ವ್ಯಕ್ತಪಡಿಸಲು ಅವಕಾಶ ಕಲ್ಪಿಸಲಾಗಿದೆ. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇದರ ಸೇವೆಯಲ್ಲಿ ಸೇರ್ಪಡೆಗೊಳ್ಳಲು ಇಚ್ಛೆಯನ್ನು ವ್ಯಕ್ತಪಡಿಸುವವರಿಗೆ ವಿಶ್ವವಿದ್ಯಾಲಯದಲ್ಲಿನ ಅಂತರ್ ಜ್ಯೇಷ್ಠತೆಯನ್ನು ನಿಗದಿಪಡಿಸಲಾಗುವುದು."**

ಮೇಲ್ಕಂಡ ಸರ್ಕಾರದ ಸೇರ್ಪಡೆ ಆದೇಶದನ್ವಯ ಸದರಿ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳು ತಾಂತ್ರಿಕ ಶಿಕ್ಷಣ ಇಲಾಖೆಯ ಸೇವೆಯಲ್ಲಿ ಮುಂದುವರೆಯಲು ಇಚ್ಛಿಸುವವರು ಈ ಪತ್ರಕ್ಕೆ ಲಗತ್ತಿಸಿರುವ **ಅಭಿಮತ ಪತ್ರ(ಎ)**ರಲ್ಲಿ ಹಾಗೂ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇದರ ಸೇವೆಯಲ್ಲಿ ಸೇರ್ಪಡೆಗೊಳ್ಳಲು ಇಚ್ಛಿಸುವವರು **ಅಭಿಮತ ಪತ್ರ(ಬಿ)**ನ್ನು 30 ದಿನಗಳೊಳಗಾಗಿ ಅಂದರೆ **ದಿನಾಂಕ: 07-06-2017** ರೊಳಗಾಗಿ ನಿರ್ದೇಶನಾಲಯಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ. ಯಾವುದೇ ಸಿಬ್ಬಂದಿಯು ನಿಗದಿಪಡಿಸಿದ ದಿನಾಂಕದೊಳಗೆ ಅಭಿಮತ ಸಲ್ಲಿಸದಿದ್ದ ಪಕ್ಷದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಸೇವೆಯಲ್ಲಿ ಮುಂದುವರೆಯಲು ಇಚ್ಛಿಸಿರುವುದಾಗಿ ಪರಿಗಣಿಸಲಾಗುವುದೆಂದು ತಿಳಿಸಲಾಗಿದೆ.. ನಿಗದಿಪಡಿಸಿದ ದಿನಾಂಕದೊಳಗೆ ಅಭಿಮತ ನೀಡಿದ ಬಳಿಕ ಯಾವುದೇ ರೀತಿ ಬದಲಾವಣೆಗೆ ಅವಕಾಶವಿರುವುದಿಲ್ಲವೆಂದು ಸೂಚಿಸಲಾಗಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ

# ಅಭಿಮತ ಪತ್ರ- ಎ

ಈ ಕೆಳಗೆ ಸಹಿಮಾಡಿರುವ ------------------- ಎಂಬ ಹೆಸರಿನವನಾದ ನಾನು -------- --------- ------ ಸಂಸ್ಥೆಯಲ್ಲಿ -------------- ವಿಭಾಗದಲ್ಲಿ ------------------ಆಗಿ ಕಾರ್ಯನಿರ್ವಹಿಸುತ್ತಿರುತ್ತೇನೆ. ಸರ್ಕಾರದ ಆದೇಶ ಸಂಖ್ಯೆ: ಇಡಿ 249 ಡಿಟಿಇ 2011, ದಿನಾಂಕ: 03-11-2011ರಲ್ಲಿ ರಾಯಚೂರು, ಹೂವಿನಹಡಗಲಿ ಮತ್ತು ಕಾರವಾರದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಪ್ರಸ್ತಾವಿತ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಗಂಗಾವತಿ ಸಂಸ್ಥೆಗಳನ್ನು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇಲ್ಲಿಗೆ ವರ್ಗಾಯಿಸಿದೆ (Transfer) ಹಾಗೂ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ಇಡಿ 162 ಟಿಜಿಎಲ್ 2016, ದಿನಾಂಕ: 27-03-2017ರಲ್ಲಿ ಹಾಲಿ ಸೇವೆ ಸಲ್ಲಿಸುತ್ತಿರುವ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿಯೇ ಮುಂದುವರೆಯಲು ಅಥವಾ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇದರ ಸೇವೆಯಲ್ಲಿ ಸೇರ್ಪಡೆಗೊಳಿಸುವ ಕುರಿತಂತೆ ತಮ್ಮ ಇಚ್ಛೆಯನ್ನು ವ್ಯಕ್ತಪಡಿಸಲು ಅವಕಾಶ ಕಲ್ಪಿಸಲಾಗಿದೆ.

ಅದರಂತೆ ನಾನು ತಾಂತ್ರಿಕ ಶಿಕ್ಷಣ ಇಲಾಖೆಯ ಸೇವೆಯಲ್ಲಿ ಮುಂದುವರೆಯಲು ಇಚ್ಛಿಸಿರುತ್ತೇನೆಂದು ನನ್ನ ಸ್ವ-ಇಚ್ಛೆಯಿಂದ ಈ ಮೂಲಕ ದೃಢೀಕರಿಸುತ್ತೇನೆ.

ದಿನಾಂಕ:

ಸ್ಥಳ:

ಸಹಿ/-

[ಹೆಸರು ಶ್ರೀ/ಶ್ರೀಮತಿ]

[ಪದನಾಮ]

**"ದೃಢೀಕರಿಸಿದೆ"**

ಪ್ರಾಚಾರ್ಯರು

# ಅಭಿಮತ ಪತ್ರ- ಬಿ

ಈ ಕೆಳಗೆ ಸಹಿಮಾಡಿರುವ ------------------ ಎಂಬ ಹೆಸರಿನವನಾದ ನಾನು -------- --------- ------ ಸಂಸ್ಥೆಯಲ್ಲಿ -------------- ವಿಭಾಗದಲ್ಲಿ -----------------ಆಗಿ ಕಾರ್ಯನಿರ್ವಹಿಸುತ್ತಿರುತ್ತೇನೆ. ಸರ್ಕಾರದ ಆದೇಶ ಸಂಖ್ಯೆ: ಇಡಿ 249 ಡಿಟಿಇ 2011, ದಿನಾಂಕ: 03-11-2011ರಲ್ಲಿ ರಾಯಚೂರು, ಹೂವಿನಹಡಗಲಿ ಮತ್ತು ಕಾರವಾರದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಪ್ರಸ್ತಾವಿತ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಗಂಗಾವತಿ ಸಂಸ್ಥೆಗಳನ್ನು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇಲ್ಲಿಗೆ ವರ್ಗಾಯಿಸಿದೆ (Transfer) ಹಾಗೂ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ಇಡಿ 162 ಟಿಜಿಎಲ್ 2016, ದಿನಾಂಕ: 27-03-2017ರಲ್ಲಿ ಹಾಲಿ ಸೇವೆ ಸಲ್ಲಿಸುತ್ತಿರುವ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿಯೇ ಮುಂದುವರೆಯಲು ಅಥವಾ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇದರ ಸೇವೆಯಲ್ಲಿ ಸೇರ್ಪಡೆಗೊಳಿಸುವ ಕುರಿತಂತೆ ತಮ್ಮ ಇಚ್ಛೆಯನ್ನು ವ್ಯಕ್ತಪಡಿಸಲು ಅವಕಾಶ ಕಲ್ಪಿಸಲಾಗಿದೆ.

ಅದರಂತೆ ನಾನು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇದರ ಸೇವೆಯಲ್ಲಿ ಸೇರ್ಪಡೆಗೊಳ್ಳಲು ಇಚ್ಛಿಸಿರುತ್ತೇನೆಂದು ನನ್ನ ಸ್ವ-ಇಚ್ಛೆಯಿಂದ ಈ ಮೂಲಕ ದೃಢೀಕರಿಸುತ್ತೇನೆ.

ದಿನಾಂಕ:

ಸ್ಥಳ:

ಸಹಿ/-

[ಹೆಸರು ಶ್ರೀ/ಶ್ರೀಮತಿ]

[ಪದನಾಮ]

**"ದೃಢೀಕರಿಸಿದೆ"**

ಪ್ರಾಚಾರ್ಯರು